# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 78 |
| ಸದಸ್ಯರ ಹೆಸರು | : ಶ್ರೀ ರಘು. ಆರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : 17.08.2026 |
| ಉತ್ತರಿಸುವ ಸಚಿವರು | : ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರು ದಸರಾ ಸಾಂಸ್ಕೃತಿಕ ಉಪ ಸಮಿತಿಯು ಇತ್ತೀಚಿಗೆ ಅರಮನೆ ಮತ್ತು ಉಳಿದ ವೇದಿಕೆ ಎಂದು ಎರಡೆರಡು ಸಭೆ ನಡೆಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; (ಮಾಹಿತಿ ನೀಡುವುದು) | ಹೌದು.<br>ಮೈಸೂರು ದಸರಾದಲ್ಲಿ ಸಾಂಸ್ಕೃತಿಕ ಉಪಸಮಿತಿಯ ವತಿಯಿಂದ ಅರಮನೆ ವೇದಿಕೆ ಒಳಗೊಂಡು ಇತರೆ 10 ವೇದಿಕೆಗಳಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಆದ್ದರಿಂದ ಕಲಾವಿದರೊಂದಿಗೆ ಸಂವಹನ ಸಾಧಿಸಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸುವ ಉದ್ದೇಶದಿಂದ ಅರಮನೆ ವೇದಿಕೆ ಹಾಗೂ ಇತರೆ ವೇದಿಕೆ ಎಂಬುದಾಗಿ ವಿಂಗಡಿಸಿ ಕಳೆದ 03 ವರ್ಷಗಳಿಂದ ಕಾರ್ಯಕ್ರಮವನ್ನು ನಿರ್ವಹಿಸಲಾಗುತ್ತಿದೆ. |
| ಆ) | ಬಂದಿದ್ದಲ್ಲಿ, ಸದರಿ ಉಪಸಮಿತಿಯನ್ನು ಮಧ್ಯವರ್ತಿ / ಏಜೆಂಟರ ಮುಖಾಂತರ ಕಾರ್ಯಕ್ರಮ ನಿಗದಿಪಡಿಸಿರುವುದು ನಿಜವೇ: ಇದರಿಂದ ಹಣ ದುರುಪಯೋಗ ಆಗುವುದಿಲ್ಲವೇ; (ಮಾಹಿತಿ ನೀಡುವುದು) | ಯಾವುದೇ ಉಪಸಮಿತಿಯನ್ನು ಮಧ್ಯವರ್ತಿ / ಏಜೆಂಟರ ಮುಖಾಂತರ ಕಾರ್ಯಕ್ರಮ ನಿಗದಿಪಡಿಸಿರುವುದಿಲ್ಲ, ಹಾಗೂ ಹಣ ದುರುಪಯೋಗ ಆಗಿರುವುದಿಲ್ಲ. |
| ಇ) | ಯಾವ ಯಾವ ಇಲಾಖೆಗಳು ದಸರಾ ಸಾಂಸ್ಕೃತಿಕ ಉಪ ಸಮಿತಿಯಲ್ಲಿ ಇರುತ್ತವೆ; ಸದರಿ ಉಪ ಸಮಿತಿಯನ್ನು ಸಂಪೂರ್ಣ ನಿರ್ವಹಣೆ ವಹಿಸುತ್ತಿರುವ ಇಲಾಖೆ ಹಾಗೂ ಅಧಿಕಾರಿಗಳ ಮಾಹಿತಿ ನೀಡುವುದು: | ದಸರಾ ಸಾಂಸ್ಕೃತಿಕ ಉಪಸಮಿತಿಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಯವರು ಉಪ ವಿಶೇಷಾಧಿಕಾರಿಗಳಾಗಿದ್ದು, ಮೈಸೂರು ಅರಮನೆ ಮಂಡಳಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿಗಳು ಹಾಗೂ ಸಾಂದರ್ಭಿಕವಾಗಿ ಇತರೆ ಯಾವುದಾದರೂ ಇಲಾಖೆಯ ಅಧಿಕಾರಿಗಳನ್ನು ಒಳಗೊಂಡಂತೆ ಉಪಸಮಿತಿಯನ್ನು ರಚಿಸಿ ನಿರ್ವಹಣೆ ಮಾಡಲಾಗುತ್ತದೆ. |
| ಈ) | ಸಂಸ್ಕೃತಿ ಇಲಾಖೆ ಮುಖಾಂತರ ಸದರಿ ಕಾರ್ಯಕ್ರಮವನ್ನು ಸಂಪೂರ್ಣವಾಗಿ ಆಯೋಜಿಸುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ನೀಡುವುದು) | ಸನ್ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯ ದಸರಾ ಉನ್ನತ ಮಟ್ಟದ ಸಮಿತಿಯ ನಿರ್ಣಯದಂತೆ ಕಾರ್ಯಕಾರಿ ಸಮಿತಿಯಲ್ಲಿ ಚರ್ಚಿಸಿ, ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತದೆ. |

ಸಂಖ್ಯೆ: ಕಸಂವಾ 59 ಕವಿಸ 2026

(ಶಿವರಾಜ್ ಎಸ್. ತಂಗಡಗಿ)
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು